# ಬಸವೇಶ್ವರ ಮೆಡಿಕಲ್ ಕಾಲೇಜು ಘಟಿಕೋತ್ಸವ ಸುದ್ದಿ

**ಚಿತ್ರದುರ್ಗ ಮೇ 6** : ನಗರದ ಶ್ರೀ ಮುರುಘರಾಜೇಂದ್ರ ಬೃಹನ್ಮಠದ ಅನುಭವ ಮಂಟಪದಲ್ಲಿ ನಡೆದ ಬಸವೇಶ್ವರ ವೈದ್ಯಕೀಯ ಕಾಲೇಜು ಮತ್ತು ಆಸ್ಪತ್ರೆಯ 2016ನೇ ಸಾಲಿನ ಬ್ಯಾಚ್‌ನ ಘಟಿಕೋತ್ಸವ ಮತ್ತು ಪದವಿ ಪ್ರದಾನ ಸಮಾರಂಭದಲ್ಲಿ 5 ಜನ ಸ್ನಾತಕೋತ್ತರ ಮತ್ತು 100 ಜನ ಸ್ನಾತಕ ಪದವೀಧರರಿಗೆ ಪದವಿ ಪ್ರದಾನ ಮಾಡಲಾಯಿತು.

ಡಾ. ಶ್ರೀ ಶಿವಮೂರ್ತಿ ಮುರುಘಾ ಶರಣರು ಸಮಾರಂಭದ ದಿವ್ಯಸಾನ್ನಿಧ್ಯ ವಹಿಸಿದ್ದರು. ಬೆಳಗಾವಿಯ ಕೆಎಲ್‌ಇ ಉನ್ನತ ಶಿಕ್ಷಣ ಮತ್ತು ಸಂಶೋಧನ ಅಕಾಡೆಮಿಯ ಕುಲಪತಿ ಡಾ. ವಿವೇಕ್ ಅರವಿಂದ್ ಸೌಜಿ, ವಿಜಯಪುರ ಬಿಎಲ್‌ಡಿಇ ಡೀಮ್ಡ್ ವಿಶ್ವವಿದ್ಯಾಲಯದ ಕುಲಪತಿ ಡಾ. ಆರ್.ಎಸ್. ಮುಧೋಳ್ ಪದವೀಧರರಿಗೆ ಪದವಿ ಪ್ರದಾನ ಮಾಡಿದರು. ಎಸ್.ಜೆ.ಎಂ. ವಿದ್ಯಾಪೀಠದ ಕಾರ್ಯದರ್ಶಿ ಎಸ್.ಕೆ. ಬಸವರಾಜನ್, ಜಂಟಿ ಕಾರ್ಯದರ್ಶಿ ಎ.ಜೆ. ಪರಮಶಿವಯ್ಯ, ಎಸ್.ಜೆ.ಎಂ. ವಿಶ್ವವಿದ್ಯಾಲಯದ ಕುಲಪತಿ ಡಾ. ಎಸ್. ಮೋಹನ್‌ಕುಮಾರ್, ರಿಜಿಸ್ಟ್ರಾರ್ ಡಾ. ಜಿತೇಂದರ್‌ಸಿಂಗ್ ಶೆಖಾವತ್, ಬಸವೇಶ್ವರ ವೈದ್ಯಕೀಯ ಕಾಲೇಜಿನ ವೈದ್ಯಕೀಯ ಅಧೀಕ್ಷಕ ಡಾ. ಪಾಲಾಕ್ಷಪ್ಪ ಎಲ್., ಡಾ. ರಾಜೇಶ್ ಎಂ.ಎಸ್. ಡಾ. ನಾರಾಯಣ ಮೂರ್ತಿ ಸಿ., ಡಾ. ಗಾನಶ್ರೀ ಸಿ.ಪಿ. ವೇದಿಕೆಯಲ್ಲಿದ್ದರು.

ಬಸವೇಶ್ವರ ವೈದ್ಯಕೀಯ ಕಾಲೇಜಿನ ಡೀನ್ ಡಾ. ಪ್ರಶಾಂತ್ ಜಿ. ಸ್ವಾಗತಿಸಿದರು. ಡಾ|| ರಾಮು ಮತ್ತು ಡಾ|| ಪವಿತ್ರ ನಿರೂಪಿಸಿದರು.










ಅನುಭವ ಮಂಟಪ